## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 616 (487) |
| ವಿಧಾನ ಪರಿಷತ್ತಿನ ಸದಸ್ಯರು | : | ಶ್ರೀ ಎಂ. ನಾಗರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವವರು | : | ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು |
| ಉತ್ತರಿಸುವ ದಿನಾಂಕ | : | 11.07.2023 |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿರುವ ದೊಡ್ಡ ಕೈಗಾರಿಕೆ ಹಾಗೂ ಕಂಪನಿಗಳಲ್ಲಿ ಸ್ಥಳೀಯರಿಗೆ ಪ್ರತಿಶತ 80 ರಷ್ಟು ಉದ್ಯೋಗಾವಕಾಶ ನೀಡಬೇಕೆಂದು ನಿಯಮವಿದ್ದರೂ, ಪರಿಣತಿ ಹೊಂದಿರುವ ಸ್ಥಳೀಯ ಅಭ್ಯರ್ಥಿಗಳಿಗೆ ಕೆಳಹಂತದ ಹುದ್ದೆಗಳನ್ನು ಕೊಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ವಿವಿಧ ಕೈಗಾರಿಕೆಗಳಲ್ಲಿ ಉದ್ಯೋಗಾವಕಾಶಗಳನ್ನು ಕೊಡುವ ನಿಟ್ಟಿನಲ್ಲಿ ಅನುಸರಿಸಲಾಗುವ ಮಾನದಂಡಗಳೇನು; (ಸಂಪೂರ್ಣವಾದ ಮಾಹಿತಿ ನೀಡುವುದು) | ಕೈಗಾರಿಕಾ ನೀತಿ 2020-25ರನ್ವಯ ಸರ್ಕಾರದಿಂದ ಪ್ರೋತ್ಸಾಹ ಮತ್ತು ರಿಯಾಯಿತಿಗಳನ್ನು ಪಡೆಯುವ ಕೈಗಾರಿಕಾ ಘಟಕಗಳು ಒಟ್ಟಾರೆ ಉದ್ಯೋಗಗಳಲ್ಲಿ ಶೇ. 70 ರಷ್ಟನ್ನು ಹಾಗೂ ಡಿ ವರ್ಗದ ಉದ್ಯೋಗಗಳಲ್ಲಿ ಶೇ. 100 ರಷ್ಟು ಕನ್ನಡಿಗರಿಗೆ/ಸ್ಥಳೀಯರಿಗೆ ನೀಡುವ ನಿಬಂಧನೆಯಿದ್ದು, ಅದರಂತೆ ಉದ್ಯೋಗಗಳನ್ನು ನೀಡಿದ ಘಟಕಗಳಿಗೆ ಮಾತ್ರ ಅರ್ಹ ಪ್ರೋತ್ಸಾಹ ಮತ್ತು ರಿಯಾಯಿತಿಗಳನ್ನು ಮಂಜೂರು ಮಾಡಲಾಗುತ್ತದೆ.<br><br>ವಿವಿಧ ಕೈಗಾರಿಕೆಗಳಲ್ಲಿನ ಉತ್ಪನ್ನಗಳ ಆಧಾರದ ಮೇಲೆ, ಕೆಲಸದ ವಾತಾವರಣದ ಮೇಲೆ (Work Environment) ಹಾಗೂ ಕೌಶಲ್ಯದ ಅಗತ್ಯತೆಗೆ ಅನುಗುಣವಾಗಿ ಕೈಗಾರಿಕೆಗಳಲ್ಲಿ ಉದ್ಯೋಗ ನೀಡಲಾಗುತ್ತಿದೆ. ಆದರೆ, ಕೈಗಾರಿಕಾ ನೀತಿಯನ್ವಯ ಸ್ಥಳೀಯರಿಗೆ ಉದ್ಯೋಗ ನೀಡಿದ್ದಲ್ಲಿ ಮಾತ್ರ ರಿಯಾಯಿತಿ ಮತ್ತು ಉತ್ತೇಜನಗಳನ್ನು ನೀಡಲಾಗುತ್ತದೆ. |
| ಆ | ಮೆಗಾ ಟೆಕ್ಸ್ ಟೈಲ್ ಪಾರ್ಕ್ ಯೋಜನೆಯನ್ನು ಭಾರತ ಸರ್ಕಾರವು ಘೋಷಿಸಿದ್ದು ಸರಿಯಷ್ಟೆ; ಈ ಯೋಜನೆಯಡಿಯಲ್ಲಿ ಬಿಜಾಪುರ ಮತ್ತು ಗುಲ್ಬರ್ಗಾದಲ್ಲಿ ಮೆಗಾ ಟೆಕ್ಸ್ ಟೈಲ್ ಪಾರ್ಕನ್ನು ಸ್ಥಾಪಿಸಬೇಕೆಂದು ರಾಜ್ಯ ಸರ್ಕಾರವು ತೀರ್ಮಾನಿಸಿರುವುದು ನಿಜವೇ; | • ಕೇಂದ್ರ ಸರ್ಕಾರದ PM-MITRA ಯೋಜನೆಯಡಿ ಕಲಬುರಗಿ ಹಾಗೂ ವಿಜಯಪುರ ಜಿಲ್ಲೆಗಳಲ್ಲಿ ಮೆಗಾ ಜವಳಿ ಪಾರ್ಕ್‌ಗಳನ್ನು ಸ್ಥಾಪಿಸಲು ತಾತ್ವಿಕ ಅನುಮೋದನೆ ಕೋರಿ ದಿನಾಂಕ 08.03.2022 ರಂದು ಜವಳಿ ಮಂತ್ರಾಲಯ, ಭಾರತ ಸರ್ಕಾರ ಇವರಿಗೆ ಪ್ರಾಥಮಿಕ ಯೋಜನಾ ವರದಿಗಳನ್ನು ಸಲ್ಲಿಸಲಾಗಿರುತ್ತದೆ.<br>• ಅದರನ್ವಯ ದಿನಾಂಕ 17.03.2023 ರಂದು ಕಲಬುರಗಿಯಲ್ಲಿ ಮಾತ್ರ ಸದರಿ ಯೋಜನೆಯಡಿ ಮೆಗಾ ಜವಳಿ ಪಾರ್ಕ್ ಸ್ಥಾಪಿಸಲು ಕೇಂದ್ರ ಸರ್ಕಾರವು ಘೋಷಿಸಿರುತ್ತದೆ.<br>• ಅದರಂತೆ, PM-MITRA ಪಾರ್ಕ್ ಯೋಜನೆಯಡಿ ಕಲಬುರಗಿಯಲ್ಲಿ ಮೆಗಾ ಜವಳಿ ಪಾರ್ಕ್ ಸ್ಥಾಪನೆಗೆ ದಿನಾಂಕ 28.03.2023 ರಂದು ಚಾಲನೆ ನೀಡಲಾಗಿರುತ್ತದೆ.<br>• ಮುಂದುವರೆದು, PM-MITRA ಪಾರ್ಕ್ ಯೋಜನೆಯಡಿ ಮೆಗಾ ಜವಳಿ ಪಾರ್ಕ್‌ನ್ನು ವಿಜಯಪುರದಲ್ಲಿಯೂ ಸ್ಥಾಪಿಸಲು ತಾತ್ವಿಕ ಅನುಮೋದನೆ ಕೋರಿ ದಿನಾಂಕ 15.06.2023 ರಂದು ಮರು ಪ್ರಸ್ತಾವನೆಯನ್ನು ಜವಳಿ ಮಂತ್ರಾಲಯ, ಭಾರತ ಸರ್ಕಾರ ಇವರಿಗೆ ಸಲ್ಲಿಸಲಾಗಿರುತ್ತದೆ. |
| ಇ | ಬಿಜಾಪುರ ಜಿಲ್ಲೆಯಲ್ಲಿ ಮೆಗಾ ಟೆಕ್ಸ್ ಟೈಲ್ ಪಾರ್ಕ್‌ಗಾಗಿ ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರಕ್ಕೆ ಕಳುಹಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಏನು ಕ್ರಮ ಕೈಗೊಂಡಿದೆ; | |
| ಈ | ಹೊರ ರಾಜ್ಯಗಳಾದ ಆಂಧ್ರಪ್ರದೇಶ, ತೆಲಂಗಾಣ, ಮಹಾರಾಷ್ಟ್ರ ಮತ್ತು ತಮಿಳುನಾಡು ಹಾಗೂ ಇನ್ನಿತರ ಕಡೆಗಳಲ್ಲಿ ಬಹಳ ಕೈಗಾರಿಕೆಗಳಿದ್ದು ಇವುಗಳಿಗೆ ಸ್ಪರ್ಧಾತ್ಮಕವಾಗಿ ಕರ್ನಾಟಕದಲ್ಲಿ ಯಾವ ಯಾವ ಕಾರ್ಯಕ್ರಮಗಳನ್ನು ಸರ್ಕಾರದ ವತಿಯಿಂದ ಕಳೆದ ಮೂರು ವರ್ಷಗಳಲ್ಲಿ ಹಮ್ಮಿಕೊಳ್ಳಲಾಗಿದೆ; ಯಾವ ಜಿಲ್ಲೆಗಳಲ್ಲಿ ಯಾವ ಯಾವ ಕೈಗಾರಿಕೆಗಳನ್ನು ಸ್ಥಾಪಿಸಲಾಗಿದೆ? (ಮಾಹಿತಿ ನೀಡುವುದು) | ಕರ್ನಾಟಕವನ್ನು ದೇಶದಲ್ಲೇ ಉತ್ಕೃಷ್ಟವಾದ ಉನ್ನತ ತಂತ್ರಜ್ಞಾನದ ಕೈಗಾರಿಕಾ ರಾಜ್ಯವನ್ನಾಗಿ ರೂಪಿಸುವ ನಿಟ್ಟಿನಲ್ಲಿ ಸರ್ಕಾರವು ಹಲವು ಉಪಕ್ರಮಗಳನ್ನು ಕೈಗೊಂಡಿದೆ. ಈ ಮೂಲಕ ದೇಶದ ವಿವಿಧೆಡೆಗಳಿಂದ ಮಾತ್ರವಲ್ಲದೇ, ವಿದೇಶಿ ಬಂಡವಾಳವನ್ನು ಆಕರ್ಷಿಸುವಲ್ಲಿ ರಾಜ್ಯವು ಮುಂಚೂಣಿಯಲ್ಲಿದೆ.<br><br>ರಾಜ್ಯಾದ್ಯಂತ ಸಮತೋಲಿತ, ಸುಸ್ಥಿರ ಮತ್ತು ಸಹಭಾಗಿತ್ವದ ಕೈಗಾರಿಕಾಭಿವೃದ್ಧಿಯನ್ನು ಸಾಧಿಸಲು ಕರ್ನಾಟಕ ಸರ್ಕಾರವು ನಿಯಮಿತವಾಗಿ 05 ವರ್ಷಗಳ ಕಾಲಾವಧಿಯ ಅಂತರದಲ್ಲಿ ಕೈಗಾರಿಕಾ ನೀತಿಯನ್ನು ಘೋಷಿಸುತ್ತಿದೆ. ಪ್ರಸ್ತುತ, ಕೈಗಾರಿಕಾ ನೀತಿ 2020-25 ನ್ನು ದಿನಾಂಕ 13.08.2020 ರಿಂದ ಅನ್ವಯವಾಗುವಂತೆ ಜಾರಿಯಲ್ಲಿರುತ್ತದೆ. |

| | | |
|---|---|---|
| | | ಅಲ್ಲದೇ, ರಾಜ್ಯದಲ್ಲಿ ಕೈಗಾರಿಕೆಗಳ ಸ್ಥಾಪನೆಗೆ ಸರ್ಕಾರವು ಕೆಳಕಂಡ ಆದ್ಯತಾ ಕ್ರಮಗಳನ್ನು ಕೈಗೊಳ್ಳಲಾಗಿದೆ: |

- ಕೈಗಾರಿಕೆಗಳನ್ನು ಪ್ರಾರಂಭಿಸಲು ಬೇಕಾಗಿರುವ ಭೂಮಿ ಖರೀದಿ ಪ್ರಕ್ರಿಯೆ ಸರಳೀಕರಣಗೊಳಿಸಲಾಗಿದೆ.
- ಕೈಗಾರಿಕೆಗಳನ್ನು ಪ್ರಾರಂಭಿಸಲು ಬೇಕಾಗಿರುವ ಕೆಲವು ಮುಖ್ಯ ಎನ್.ಓ.ಸಿ.ಗಳನ್ನು ಪಡೆಯಲು 3 ವರ್ಷಗಳ ವರೆಗೆ ಸಮಯವನ್ನು ವಿಸ್ತರಿಸಿ ಕರ್ನಾಟಕ ಕೈಗಾರಿಕೆಗಳ (ಸೌಲಭ್ಯ) ಅಧಿನಿಯಮ 2002ಕ್ಕೆ ತಿದ್ದುಪಡಿ ತರಲಾಗಿದೆ.
- ಕೈಗಾರಿಕೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಕಾರ್ಮಿಕರಿಗೆ ಕಾರ್ಮಿಕ ಕಾನೂನನ್ನು ಸರಳೀಕರಣಗೊಳಿಸಲಾಗಿದೆ.

ಕಳೆದ ಮೂರು ವರ್ಷಗಳಲ್ಲಿ ಈ ಕೆಳಕಂಡ ಕಾಯಕ್ರಮಗಳನ್ನು ನಡೆಸಲಾಗಿದೆ:

1. **<u>FMCG ಹುಬ್ಬಳ್ಳಿ ಬಂಡವಾಳ ಹೂಡಿಕೆದಾರರ ಸಮಾವೇಶ:</u>**

FMGC ಕ್ಲಸ್ಟರ್ ಹುಬ್ಬಳ್ಳಿ ಬಂಡವಾಳ ಹೂಡಿಕೆದಾರರ ಸಮಾವೇಶವನ್ನು ದಿನಾಂಕ 28.10.2022 ರಂದು ಆಯೋಜಿಸಲಾಗಿತ್ತು. ಈ ಸಮಾವೇಶದಲ್ಲಿ ಒಟ್ಟು ರೂ.1275 ಕೋಟಿ ಬಂಡವಾಳ ಹೂಡಿಕೆ ಹಾಗೂ ಇದರಿಂದ 9100 ಜನರಿಗೆ ಉದ್ಯೋಗ ಅವಕಾಶ ಕಲ್ಪಿಸುವ ಒಟ್ಟು 16 ಕಂಪನಿಗಳೊಂದಿಗೆ ಒಪ್ಪಂದ (MOU) ಮಾಡಿಕೊಳ್ಳಲಾಗಿದೆ.

2. **<u>ಇನ್ವೆಸ್ಟ್ ಕರ್ನಾಟಕ 2022:</u>**

2022ರ ನವೆಂಬರ್ 2 ರಿಂದ 4ರ ವರೆಗೆ ಬೆಂಗಳೂರಿನಲ್ಲಿ ಆಯೋಜಿಸಲಾಗಿದ್ದ "ಇನ್ವೆಸ್ಟ್ ಕರ್ನಾಟಕ 2022: ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶ" ಕಾರ್ಯಕ್ರಮದಲ್ಲಿ ಬಂಡವಾಳ ಹೂಡಿಕೆ ಆಕರ್ಷಣೆ ವಿವರ ಕೆಳಕಂಡಂತಿದೆ.

| ವಿವರ | ಬಂಡವಾಳ ಹೂಡಿಕೆ (ರೂ. ಕೋಟಿ) |
|---|---|
| ರಾಜ್ಯ ಏಕಗವಾಕ್ಷಿ ಸಭೆಗಳಲ್ಲಿ ಅನುಮೋದನೆ ಗೊಂಡ ಯೋಜನೆಗಳು | 2,83,415 |
| ಒಡಂಬಡಿಕೆ ಮಾಡಿಕೊಂಡ ಯೋಜನೆಗಳು | 5,41,369 |
| ಸಮಾವೇಶದಲ್ಲಿ ಪ್ರಮುಖ ಕೈಗಾರಿಕೋದ್ಯಮಿಗಳು ಘೋಷಿಸಿದ ಬಂಡವಾಳ ಹೂಡಿಕೆ | 1,57,000 |
| **ಒಟ್ಟು** | **9,81,784** |

3. **<u>ಏರೋ ಇಂಡಿಯಾ 2023:</u>**

ದಿನಾಂಕ 13 ರಿಂದ 17ರ ಫೆಬ್ರುವರಿ 2023 ರವರೆಗೆ ಏರ್ ಫೋರ್ಸ್ ಸ್ಟೇಷನ್, ಯಲಹಂಕ, ಬೆಂಗಳೂರು ಇಲ್ಲಿ ನಡೆದ ಏರೋ ಇಂಡಿಯಾ 2023 ಕಾರ್ಯಕ್ರಮದಲ್ಲಿ ರಾಜ್ಯ ಸರ್ಕಾರದ ಪರವಾಗಿ "ಕರ್ನಾಟಕ ಪೆವಿಲಿಯನ್" ಸ್ಥಾಪಿಸುವ ಮೂಲಕ ಕರ್ನಾಟಕ ಉದ್ಯೋಗ ಮಿತ್ರ ಸಂಸ್ಥೆ ಭಾಗವಹಿಸಲಾಗಿತ್ತು. ಈ ಕಾರ್ಯಕ್ರಮದಲ್ಲಿ 32 ಏರೋಸ್ಪೇಸ್ ಮತ್ತು ಡಿಫೆನ್ಸ್ ವಲಯದ ಕಂಪನಿಗಳೊಂದಿಗೆ ರೂ.2930 ಕೋಟಿ ಬಂಡವಾಳ ಹೂಡಿಕೆಗೆ ಒಪ್ಪಂದ (MOU) ಸಹಿ ಮಾಡಿಕೊಳ್ಳಲಾಗಿದೆ.

4. **<u>ಅನುಮೋದಿಸಲಾಗಿರುವ SLSWCC ಮತ್ತು SHLCC ನ ಹೂಡಿಕೆ ಪ್ರಸ್ತಾವನೆಗಳು:</u>**

2020-21 ರಿಂದ 2022-23 ನೇ ಸಾಲಿನಲ್ಲಿ **<u>SLSWCC ಮತ್ತು SHLCC</u>** ಸಭೆಗಳಲ್ಲಿ ಒಟ್ಟು 1531 ಯೋಜನಾ ಪ್ರಸ್ತಾವನೆಗಳಿಗೆ ಅನುಮೋದನೆ ನೀಡಲಾಗಿದೆ. ಈ ಯೋಜನೆಗಳಿಂದ ರೂ. 4,22,423 ಕೋಟಿ ಬಂಡವಾಳ ಹೂಡಿಕೆಯಾಗಿ ಒಟ್ಟು 5,84,076 ಜನರಿಗೆ ಉದ್ಯೋಗ ಅವಕಾಶ ದೊರೆಯಲಿದೆ.

| ಸಮಿತಿ | ಅನುಮೋದನೆ ಗೊಂಡಿರುವ ಪ್ರಸ್ತಾವನೆಗಳು | ಬಂಡವಾಳ ಹೂಡಿಕೆ (ರೂ.ಕೋಟಿ) | ಉದ್ಯೋಗ ಸೃಜನೆ |
|---|---|---|---|
| SLSWCC | 1450 | 69,733 | 334497 |
| SHLCC | 81 | 3,52,690 | 249579 |
| **Total** | **1531** | **4,22,423** | **584076** |

ಪ್ರಮುಖ ವಲಯಗಳಾದ ಉಕ್ಕು & ಸ್ಟೀಲ್, ಸಕ್ಕರೆ, ಸಿದ್ದ ಉಡುಪು, ಆಟೋ ಮೋಬೈಲ್, ಆಹಾರ ಸಂಸ್ಕರಣೆ, ನವೀಕರಿಸಬಹುದಾದ ಇಂಧನ, ಐಟಿ/ಬಿಟಿ, ಸಿಮೆಂಟ್ ಹಾಗೂ ಇತರೆ ವಲಯದ ಉದ್ದಿಮೆಗಳ ಸ್ಥಾಪನೆಗಾಗಿ ಅನುಮೋದನೆ ನೀಡಲಾಗಿದೆ.

**ಸಿಐ 148 ಎಸ್‌ಪಿಐ 2023**

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು